MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER · VOICE OF THE NATION

ಕನ್ನಡ ದಿನಪತ್ರಿಕೆ “ಇದು ರಾಷ್ಟ್ರದ ಧ್ವನಿ”

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 321 | ಶನಿವಾರ : 11-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 321 | SATURDAY : 11-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕಾಂಗ್ರೆಸ್‌ನಲ್ಲಿ ಬಣ ಬಡಿದಾಟ

**ಬೆಂಗಳೂರು, ಅ. 10–** ರಾಜ್ಯದಲ್ಲಿ ಸದ್ದು ಮಾಡುತ್ತಿರುವ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ಈ ಎಲ್ಲಾ ವಿಚಾರಗಳು ಸದ್ಯಕ್ಕೆ ತಾರ್ಕಿಕ ಅಂತ್ಯಕ್ಕೆ ಮುಟ್ಟುವ ಸಾಧ್ಯತೆ ತೀರಾ ಕಡಿಮೆ. ಇವೆಲ್ಲಾ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣದ ರಾಜಕೀಯ ತಂತ್ರ-ಪ್ರತಿತಂತ್ರ ಎಂದೇ ವ್ಯಾಖ್ಯಾನಿಸಲಾಗುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಣದವರು ನಾಯಕತ್ವ ಅಬಾಧಿತ ಎಂಬ ಸಂದೇಶವನ್ನು ರವಾನಿಸುವ ನಿಟ್ಟಿನಲ್ಲಿ ತಂತ್ರ ರೂಪಿಸುತ್ತಿದ್ದರೇ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣದವರು ಅಧಿಕಾರ ಹಂಚಿಕೆ ಶತಸಿದ್ಧ ಎಂಬುದನ್ನು ಸಾರಲು ತಮ್ಮದೇ ಆದ ಪ್ರತಿ ತಂತ್ರವನ್ನು ರೂಪಿಸುತ್ತಿದ್ದಾರೆ. ಹಾಗಾಗಿಯೇ ರಾಜ್ಯದಲ್ಲಿ ಈಗ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ವಿಚಾರಗಳು ಮುನ್ನೆಲೆಗೆ ಬಂದಿವೆ.

ಬಿಹಾರ ವಿಧಾನಸಭಾ ಚುನಾವಣೆ ಹತ್ತಿರದಲ್ಲಿರುವಾಗ



ಹೈಕಮಾಂಡ್ ರಾಜ್ಯದಲ್ಲಿ ಯಾವುದೇ ರಾಜಕೀಯ ವಿದ್ಯಮಾನಗಳಿಗೆ ಅವಕಾಶ ಕೊಡುವ ಸಾಧ್ಯತೆ ತೀರಾ ಕಡಿಮೆ. ಹಾಗಾಗಿ ರಾಜ್ಯದಲ್ಲಿ ಕೇಳಿ ಬರುತ್ತಿರುವ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ವಿಚಾರಗಳಿಗೆ ಸದ್ಯಕ್ಕೆ ಮುಕ್ತಿ ಸಿಗಲ್ಲ. ಏನೇ ಆದರೂ, ಎಲ್ಲವೂ ಬಿಹಾರ ವಿಧಾನಸಭಾ ಚುನಾವಣೆಯ ನಂತರವೇ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

## ಅ.16ಕ್ಕೆ ಅಲೆಮಾರಿ ಸಮುದಾಯ ಪ್ರತಿಭಟನೆ : ಸುಭಾಸ್ ಚೌಹಾಣ್




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.10–** ಜಸ್ಟಿಸ್ ಹೆಚ್.ಎನ್. ನಾಗಮೋಹನ್‌ದಾಸ್‌ರ ವರದಿಯಂತೆ ಅಸ್ಪೃಶ್ಯ ಅಲೆಮಾರಿಗಳಿಗೆ ಶೇ.1 ಮೀಸಲಾತಿ ನೀಡಲು ಆಗ್ರಹಿಸಿ ಕರ್ನಾಟಕ ಅಸ್ಪೃಶ್ಯ ಅಲೆಮಾರಿ ಸಮುದಾಯಗಳ ಮಹಾಒಕ್ಕೂಟದಿಂದ ಅ.16ರಂದು ಬೃಹತ್ ಸ್ವಾಭಿಮಾನಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆಬಎಂದು ಅಲೆಮಾರಿ ಸಮುದಾಯದ ರಾಜ್ಯಾಧ್ಯಕ್ಷ ಸುಭಾಸ್ ಚೌಹಾಣ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿದ ಅವರು, ಒಳಮೀಸಲಾತಿ ಹಂಚಿಕೆಗೆ ಅರ್ಹವಾಗಿರುವ ಬುಡ್ಗ ಜಂಗಮ, ಸುಡುಗಾಡು ಸಿದ್ಧರು, ಚೆನ್ನದಾಸರ, ಹೊಲೆಯದಾಸರ, ಸಿಳ್ಳೆಕ್ಯಾತ, ಸಿಂಧೋಳ್, ಮಾಲದಾಸರ, ಡೊಂಬರ, ದಕ್ಕಲಿಗರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅಂದಿನ ದಿನ ಪಟ್ಟಣದ ಗಡಿಯಾರ ಚೌಕ ಮೂಲಕ ಸಹಾಯಕ ಆಯುಕ್ತರ ಕಚೇರಿ ವರೆಗೆ ಪ್ರತಿಭಟನಾ ರ್‍ಯಾಲಿ ನಡೆಸಲಾಗುವುದು. ಪರಿಶಿಷ್ಟ ಜಾತಿ ಅಸ್ಪೃಶ್ಯ 59 ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕವಾಗಿ ಶೇ.1 ಮೀಸಲಾತಿ ಜಾರಿಗೊಳಿಸಬೇಕು. ಪರಿಶಿಷ್ಟ ಜಾತಿ ಅಸ್ಪೃಶ್ಯ 59 ಅಲೆಮಾರಿ ಸಮುದಾಯಗಳ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಸ್ಥಾಪನೆ ಮಾಡಬೇಕು. ರಾಜಕೀಯ ಪ್ರಾತಿನಿಧ್ಯ ನೀಡಲು ಒಂದು ಎಂಎಲ್‌ಸಿ ಸ್ಥಾನಕ್ಕೆ ನಾಮನಿರ್ದೇಶನ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಚಂದ್ರಪ್ಪ ಬಸವರಾಜ, ಭರಮಣ್ಣ ಶಿವಾಚಿ ಸೇರಿ ಇತರರು ಇದ್ದರು.

## ಜಿಲ್ಲಾದ್ಯಂತ ಎಲ್ಲ ಶಾಲಾ-ಕಾಲೇಜುಗಳಲ್ಲಿ ಅಭಿಯಾನ ರೀತಿಯಲ್ಲಿ ಜನಜಾಗೃತಿ ಕಾರ್ಯಕ್ರಮ ಹೆಚ್ಚಿಸಿ: ಎನ್.ಎಚ್.ಕೋನರಡ್ಡಿ




ಯುವ ಮಾರ್ಗ ಸುದ್ದಿ

**ರಾಯಚೂರು,ಅ.10–**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆ ಮತ್ತು ಪೊಲೀಸ್ ಇಲಾಖೆಗಳು ಜಂಟಿಯಾಗಿ ಸೇರಿ ಜಿಲ್ಲಾದ್ಯಂತ ಎಲ್ಲ ಶಾಲಾ ಕಾಲೇಜುಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಅಭಿಯಾನ ಮಾದರಿಯಲ್ಲಿ ಕಡ್ಡಾಯ ರೂಪಿಸಿ ವಿದ್ಯಾರ್ಥಿ ಯುವಜನರು ತಪ್ಪು ಹಾದಿಗೆ ಹೋಗದಂತೆ ನೋಡಿಕೊಳ್ಳಬೇಕು ಎಂದು ವಿಧಾನಸಭೆ ಸದಸ್ಯರು ಆಗಿರುವ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್ ಎಚ್ ಕೋನರೆಡ್ಡಿ ಅವರು ಆಯಾ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.10ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಇನ್ನೀತರ ಇಲಾಖೆಗಳ ಯೋಜನೆಗಳ ಹಾಗೂ ಕಾರ್ಯಕ್ರಮಗಳ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಬೇರೆ ಬೇರೆ ಇಲಾಖೆಗಳಲ್ಲಿ ದಾಖಲಾದ ಪೋಕ್ಸೊ ಜೊತೆ ಅತ್ಯಾಚಾರ, ಬಾಲ್ಯವಿವಾಹ, ಅಪಹರಣ, ಬಾಲ ಕಾರ್ಮಿಕರ ಸಂಖ್ಯೆಯ ಅಂಕಿ ಸಂಖ್ಯೆಗಳನ್ನು ಗಮನಿಸಿದಾಗ ಆತಂಕವಾಗುತ್ತದೆ. ಸಮಾಜದಲ್ಲಿ ಈಗಿನ ಮಕ್ಕಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ದಾರಿ ತಪ್ಪುತ್ತಿದ್ದಾರೆ ಎಂಬುದು ತಿಳಿಯುತ್ತಿದೆ. ನಾವು ತಪ್ಪು ಮಾಡುತ್ತಿದ್ದೇವೆ ಎಂಬುದರ ಬಗ್ಗೆ ಮಕ್ಕಳು, ವಿದ್ಯಾರ್ಥಿ ಯುವಜನರಲ್ಲಿ ಅರಿವಿಲ್ಲದ್ದಕ್ಕೆ ಅತ್ಯಾಚಾರ, ಬಾಲಗ ರ್ಭಿಣಿಯರ ಪ್ರಕರಣಗಳು ಹೆಚ್ಚುತ್ತಿದೆ ಎಂದು ಪೊಲೀಸ್ ಇಲಾಖೆಯ ಅಧಿಕಾರಿಗಳು ತಿಳಿಸುತ್ತಿದ್ದಾರೆ. ಸಂಬಂಧಿಸಿದ ಆಯಾ ಇಲಾಖೆಗಳ ಅಧಿಕಾರಿಗಳು, ಜಿಲ್ಲಾಧಿಕಾರಿಗಳ, ಜಿಲ್ಲಾ ಪಂಚಾಯತ್ ಸಿಇಓ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿ ಕಾರಿಗಳ ಮಾರ್ಗದರ್ಶನದಲ್ಲಿ ಜಿಲ್ಲಾದ್ಯಂತ ಎಲ್ಲ ಶಾಲಾ ಕಾಲೇಜುಗಳಲ್ಲಿ ಅಭಿಯಾನ ರೀತಿಯಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಲೇಬೇಕು ಎಂದು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ಇಲಾಖೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ 2021ರಲ್ಲಿ 45, 2022ರಲ್ಲಿ 53, 2023ರಲ್ಲಿ 66, 2024ರಲ್ಲಿ 86 ಮತ್ತು 2025ರಲ್ಲಿ 44 ಪೋಕ್ಸೊ ಜೊತೆ ಅತ್ಯಾಚಾರ ಪ್ರಕರಣಗಳು ಹಾಗೂ 2021 ಮತ್ತು 2022ರಲ್ಲಿ ತಲಾ 7, 2023ರಲ್ಲಿ 13, 2024ರಲ್ಲಿ 12 ಮತ್ತು 2025ರಲ್ಲಿ 11 ಪೋಕ್ಸೊ ಪ್ರಕರಣಗಳು ದಾಖಲಾಗಿವೆ. 2021ರಲ್ಲಿ 11, 2022ರಲ್ಲಿ 1, 2023ರಲ್ಲಿ 5, 2024ರಲ್ಲಿ 2 ಮತ್ತು 2025ರಲ್ಲಿ 7 ಬಾಲ್ಯವಿವಾಹ ಪ್ರಕರಣಗಳು ದಾಖಲಾಗಿವೆ. 2021ರಲ್ಲಿ 128, 2022ರಲ್ಲಿ 155, 2023ರಲ್ಲಿ 209, 2024ರಲ್ಲಿ 193 ಮತ್ತು 2025ರಲ್ಲಿ 203 ಮಹಿಳಾ ಕಾಣೆ ಪ್ರಕರಣಗಳು ದಾಖಲಾಗಿವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ ಅವರು ಸಭೆಗೆ ಮಾಹಿತಿ ನೀಡಿದರು.

ಮಕ್ಕಳು ದಾರಿ ತಪ್ಪುವುದಕ್ಕೆ ಮೂಲ ಕಾರಣ ಏನು ಎಂಬುದರ ಬಗ್ಗೆ ತಿಳಿದುಕೊಳ್ಳಬೇಕು. ವಿಶೇಷವಾಗಿ ಜಿಲ್ಲಾ ಪೊಲೀಸ್ ಇಲಾಖೆಯು ಶಾಲಾ ಶಿಕ್ಷಣ ಮತ್ತು ಪದವಿ ಪೂರ್ವ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆಗಳ ಸಹಯೋಗದೊಂದಿಗೆ ಪೊಕ್ಸೊ ಕುರಿತಂತೆ ಕಾಲೇಜು ಮಟ್ಟದಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಬೇಕು ಜೊತೆಗೆ ಮಕ್ಕಳ ಪಾಲಕರಿಗೆ ಸಹ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಸಮಿತಿಯ ಅಧ್ಯಕ್ಷರು ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

18 ವರ್ಷದೊಳಗಿನ ಮಕ್ಕಳ ಮೇಲೆ ವಿಶೇಷ ನಿಗಾ ಇಡಬೇಕು. ಈ ಬಗ್ಗೆ ಬೇರೆ ಬೇರೆ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಸಮಿತಿಯ ಸದಸ್ಯರಾದ ಹೆಚ್. ಎ.ಇಕ್ಬಾಲ್ ಹುಸೇನ ಪೊಲೀಸ್ ಅಧಿಕಾರಿಗಳಿಗೆ ಸಲಹೆ ಮಾಡಿದರು.

ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಗಂಭೀರವಾಗಿ ಗಮನಹರಿಸಿ(2ನೇಪುಟ)

## ಬೆಂಗಳೂರಿನಲ್ಲಿ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಉನ್ನತಮಟ್ಟದ ಸಭೆ




ಯುವ ಮಾರ್ಗ ಸುದ್ದಿ

**ರಾಯಚೂರು,ಅ.10–**ಪೋಕ್ಸೊ, ಪೋಕ್ಸೊ ಜೊತೆ ಅತ್ಯಾಚಾರ, ಬಾಲ್ಯವಿವಾಹ, ಬಾಲ ಕಾರ್ಮಿಕ, ಮಹಿಳೆಯರು ಹಾಗೂ ಮಕ್ಕಳ ಕಾಣೆ ಪ್ರಕರಣಗಳು ಹೆಚ್ಚುತ್ತಿದ್ದು, ಈ ಬಗ್ಗೆ ವಿಶೇಷವಾಗಿ ಚರ್ಚಿಸಲು ವಿಶೇಷವಾಗಿ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಲಾಗುವುದು. ಈ ಸಭೆಯಲ್ಲಿ ಬೇರೆ ಬೇರೆ ವಿಷಯಗಳ ಬಗ್ಗೆ ಸಮಗ್ರ ಚರ್ಚಿಸಿ ತೀಮಾರ್ನಿಸಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇವೆ ಎಂದು ವಿಧಾನಸಭೆ ಸದಸ್ಯರು ಆಗಿರುವ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್ ಎಚ್ ಕೋನರೆಡ್ಡಿ ಅವರು ತಿಳಿಸಿದರು.

ರಾಯಚೂರು ಜಿಲ್ಲಾ ಪ್ರವಾಸದಲ್ಲಿ ಅಕ್ಟೋಬರ್ 10ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಿತಿಯ ಇತರ ಸದಸ್ಯರೊಂದಿಗೆ ಸಭೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ಸಮಿತಿಯ ಸಭೆ ನಡೆಯಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾಗಿರುವ ದೇವದುರ್ಗ ಶಾಸಕರಾದ ಕರೆಮ್ಮ ಅವರು ಕೋರಿದ್ದರು. ಪೋಕ್ಸೊ, ಪೋಕ್ಸೊ ಜೊತೆ ಅತ್ಯಾಚಾರ, ಬಾಲ್ಯವಿವಾಹ, ಬಾಲ ಕಾರ್ಮಿಕದಂತಹ ಪ್ರಕರಣಗಳ ವಿಷಯವನ್ನು ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಗಂಭೀರವಾಗಿ ಪರಿಗಣಿಸಿದೆ. ರಾಯಚೂರ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಹೆಚ್ಚುತ್ತಿವೆ ಎಂಬುದರ ಬಗ್ಗೆ ಗೊತ್ತಾಗಿ ಈ ಬಗ್ಗೆ ಮಾಹಿತಿ ಪಡೆದು ಅಧಿಕಾರಿಗಳಿಗೆ ಕೆಲವು ಸೂಚನೆಗಳನ್ನು ನೀಡಿ ಸರಿಪಡಿಸುವ ಪ್ರಯತ್ನದಿಂದ ಸಮಿತಿಯು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದೆ ಎಂದು ಅವರು ತಿಳಿಸಿದರು.

ಮಕ್ಕಳು ಮತ್ತು ವಿದ್ಯಾರ್ಥಿ ಯುವಜನರ ಬಗ್ಗೆ ಸರಿಯಾಗಿ ನೋಡಿಕೊಳ್ಳಬೇಕು. ರಾಜ್ಯದ ಯಾವುದೇ ಕಡೆಗಳಲ್ಲಿ ಪೋಕ್ಸೊ, ಬಾಲ್ಯವಿವಾಹ, ಬಾಲ ಕಾರ್ಮಿಕ ಪ್ರಕರಣಗಳು ದಾಖಲಾಗದಂತೆ ಮುನ್ನೆಚ್ಚರಿಕೆ ವಹಿಸಲು ಆಯಾ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲು ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಸಮಿತಿಯ ಎಲ್ಲ ಸದಸ್ಯರಿಗೆ ಸಲಹೆ ಮಾಡಿದ್ದಾರೆ. ಹಾಗಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಎರಡು, ಹೊರ ಜಿಲ್ಲೆಯಲ್ಲಿ ಒಂದು ಸಭೆಯನ್ನು ನಿಯಮಿ ತವಾಗಿ ನಡೆಸುತ್ತಿದೆ. ರಾಯಚೂರು ಸೇರಿದಂತೆ ರಾಜ್ಯಾದ್ಯಂತ ಪೋಕ್ಸೊ, ಅತ್ಯಾಚಾರ, ಬಾಲ್ಯವಿವಾಹ, ಮಹಿಳೆಯರ ಮತ್ತು ಮಕ್ಕಳ ಅಪಹರಣದ, ಬಾಲ ಕಾರ್ಮಿಕ ಪ್ರಕರಣಗಳ ಸಂಖ್ಯೆ ಇಳಿಕೆಗೆ ಸಮಿತಿಯು ಶಕ್ತಿ ಮೀರಿ ಪ್ರಯತ್ನಿಸುತ್ತಿದೆ ಎಂದು ಎನ್ ಎಚ್ ಕೋನರೆಡ್ಡಿ ಸುದ್ದಿಗಾರರಿಗೆ ತಿಳಿಸಿದರು.

ಈ ವೇಳೆ, ಶಾಸಕರು ಆಗಿರುವ ಸಮಿತಿಯ ಸದಸ್ಯರಾದ ಹೆಚ್.ಎ.ಇಕ್ಬಾಲ್ ಹುಸೇನ, ಶರಣಗೌಡ ಕಂದಕೂರ, ಕರೆಮ್ಮ ಜಿ ನಾಯಕ, ಶಾಂತಾರಾಮ್ ಬುಡ್ನಸಿದ್ದಿ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ ಹಾಗೂ ಇನ್ನಿತರರು ಇದ್ದರು.

## ಸದನ ಸಮಿತಿ ಸಭೆಗೆ ತಪ್ಪು ಮಾಹಿತಿ ಕೊಟ್ಟಿದ್ದಕ್ಕೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗೆ ನೋಟೀಸ್ ಜಾರಿ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.10–** ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸಭೆಗೆ ತಪ್ಪು ಮಾಹಿತಿ ನೀಡಿದ್ದಕ್ಕೆ ರಾಯಚೂರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗೆ ಕಾರಣ ಕೇಳಿ ನೋಟೀಸ್ ಜಾರಿಗೆ ವಿಧಾನಸಭಾ ಸದಸ್ಯರು ಆಗಿರುವ, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್ ಎಚ್ ಕೋನರಡ್ಡಿ ಅವರು ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಇನ್ನೀತರ ಇಲಾಖೆಗಳ ಎಲ್ಲಾ ಯೋಜನೆಗಳ ಹಾಗೂ ಕಾರ್ಯಕ್ರಮಗಳ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.10ರಂದು ನಡೆದ ಸಭೆಯಲ್ಲಿ ಮೊದಲಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ರಮಗಳ



ಪರಿಶೀಲನೆ ನಡೆಯಿತು.

ಮಕ್ಕಳ ಕಲ್ಯಾಣ ಸಮಿತಿಯು 84 ಪ್ರಕರಣಗಳಲ್ಲಿ 66 ಪ್ರಕರಣಗಳನ್ನು ವಿಲೆಗೊಳಿಸಿ 18 ಪ್ರಕರಣಗಳು ಬಾಕಿ ಇರುತ್ತವೆ ಎಂದು ಸಮಿತಿಗೆ ನೀಡಿದ ಬುಕಲೇಟನಲ್ಲಿ ದಾಖಲಿಸಿದ್ದೀರಿ. ಆದರೆ, ಪಿಪಿಟಿನಲ್ಲಿ ಬೇರೆ ಅಂಕಿ ಅಂಶಗಳನ್ನು ತೋರಿಸ್ತ್ತೀರಿ ಎಂದು ಅಧ್ಯಕ್ಷರು ಪ್ರಶ್ನಿಸಿದರು. ವಾರದ ತರಬೇತಿ ಮುಗಿಸಿ ಸಭೆಗೆ ಆಗಮಿಸಿದ್ದರಿಂದ ಪಿಪಿಟಿಯಷ್ಟೆ ಸರಿಪಡಿಸಿದ್ದೇವೆ. ಬುಕಲೆಟನಲ್ಲಿ ತಿದ್ದುಪಡಿ ಮಾಡಿರುವುದಿಲ್ಲ, ತಪ್ಪಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಪ್ರತಿಕ್ರಿಯಿಸಿದರು.

ಸಭೆಯಲ್ಲಿ ಚರ್ಚಿಸುವ ಪ್ರತಿಯೊಂದು ವಿಷಯವೂ ಕಡತಕ್ಕೆ ಹೋಗುವ ಮಹತ್ವದ ವಿಧಾನ ಮಂಡಲದ ಸದಸ್ಯರ ಸಮಿತಿ ಸಭೆಗೆ ಹೀಗೆ ತಪ್ಪು ಮಾಹಿತಿ(2ನೇಪುಟಕ್ಕೆ)

## ಶ್ರೇಷ್ಠ ಗ್ರಂಥ ನೀಡಿದ ವಾಲ್ಮೀಕಿಯನ್ನು ಪ್ರತಿಯೊಬ್ಬರು ಸ್ಮರಿಸಬೇಕು:ವೆಂಕನಗೌಡ ಪಾಟೀಲ್

ಯುವ ಮಾರ್ಗ ಸುದ್ದಿ

**ಅರಕೇರಾ,ಅ.10–** ಆದರ್ಶದ ಕಣಿಯಾಗಿರುವ ರಾಮಾಯಣವು ಜಗತ್ತಿನಲ್ಲೆ ಶ್ರೇಷ್ಠ ಗ್ರಂಥವಾಗಿದೆ. ಪ್ರತಿಯೊಬ್ಬರಿಗೂ ಜೀವನದ ಪಾಠವನ್ನು ತಿಳಿಸಿಕೊಡುತ್ತದೆ. ಅಂತಹ ಕೃತಿ ರಚಿಸಿದ ವಾಲ್ಮೀಕಿ ಅವರನ್ನು ಎಲ್ಲರು ಸ್ಮರಿಸಬೇಕು ಎಂದು ನಿವೃತ್ತ ತಹಶೀಲ್ದಾರ ವೆಂಕನಗೌಡ ಪಾಟೀಲ್ ನವಿಲಗುಡ್ಡ ಹೇಳಿದರು.

ತಾಲ್ಲೂಕಿನ ಮದರಕಲ್ ಗ್ರಾಮದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತಿ ಹಾಗೂ ನೂತನ ವೃತ್ತ ಸ್ಥಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಆಚರಣೆಗಳು ಕೇವಲ



ಆಚರಣೆಗಳಾಗಿ ಉಳಿಯದೆ, ಸಮಾಜದಲ್ಲಿ ಪರಿವರ್ತನೆಯಾಗಬೇಕು. ಸಾಮರಸ್ಯದಿಂದ ಬದುಕಲು ಪರಸ್ಪರ ಗೌರವ, ಸಹಕಾರ ಮತ್ತು ಕರುಣೆ ಮುಖ್ಯವಾಗಿದೆ. ಸರಿಯಾದ ತಿಳುವಳಿಕೆ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸಲು ಶಿಕ್ಷಣ ಅತ್ಯಗತ್ಯ. ಇದರಿಂದ ವ್ಯಕ್ತಿಗಳು ಸರಿಯಾದ ನಿರ್ಧಾರಗಳನ್ನು ತೆಗೆದುಕೊಳ್ಳಲು ಮತ್ತು ಸಮಾಜಕ್ಕೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ.(2ನೇಪುಟಕ್ಕೆ)

# AI ಬಳಸಿ 36 ವಿದ್ಯಾರ್ಥಿನಿಯರ ಆಕ್ಷೇಪಾರ್ಹ ಚಿತ್ರ ಸೃಷ್ಟಿಸಿದ ಐಐಐಟಿ ವಿದ್ಯಾರ್ಥಿ ಅದ್ನಾನ್ ಅಲಿ ಬಂಧನ



**ರಾಯ್‌ಪುರ, ಅ. 10–** ಕೃತಕ ಬುದ್ಧಿಮತ್ತೆ ಬಳಕೆ ಮಾಡಿಕೊಂಡು ಮಹಿಳಾ ವಿದ್ಯಾರ್ಥಿಗಳ ಆಕ್ಷೇಪಾರ್ಹ ಚಿತ್ರಗಳನ್ನು ರಚಿಸಿದ ಆರೋಪದ ಮೇಲೆ ಛತ್ತಿಸ್‌ಗಢದ ನವ ರಾಯ್ಪುರದಲ್ಲಿರುವ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಇಂಟರ್ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇನ್ಫರ್ಮೇಷನ್ ಟೆಕ್ನಾಲಜಿ (ಐಐಐಟಿ) ವಿದ್ಯಾರ್ಥಿಯನ್ನು ಬಂಧಿಸಲಾಗಿದೆ.

ಐಐಐಟಿ ರಿಜಿಸ್ಟ್ರಾರ್ ಡಾ.ಶ್ರೀನಿವಾಸ್ ಅವರು ನೀಡಿದ ದೂರಿನ ಆಧಾರದ ಮೇರೆಗೆ ಎರಡನೇ ವರ್ಷದ ವಿದ್ಯಾರ್ಥಿ ಸಯ್ಯದ್ ರಹೀಮ್ ಅದ್ನಾನ್ ಅಲಿ (21) ಅವರನ್ನು ಅವರ ಸ್ವಂತ ಬಿಲಾಸ್ಪುರ್ ಜಿಲ್ಲೆಯಿಂದ ಬಂಧಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿವೇಕ್ ಶುಕ್ಲಾ ತಿಳಿಸಿದ್ದಾರೆ.ವಿಷಯ ಬೆಳಕಿಗೆ ಬಂದ ನಂತರ, ರಾಖಿ ಪೊಲೀಸರ ತಂಡವು ಸಂಸ್ಥೆಯನ್ನು ತಲುಪಿತು. ಸಂಸ್ಥೆಯ ಬಾಲಕರ ಹಾಸ್ಟೆಲ್‌ನಲ್ಲಿ ವಾಸಿಸುತ್ತಿದ್ದ ಅಲಿ, ಎಐ ಇಮೇಜ್ ಜನರೇಷನ್ ಮತ್ತು ಎಡಿಟಿಂಗ್ ಪರಿಕರಗಳನ್ನು ಬಳಸಿಕೊಂಡು ಸುಮಾರು 36 ಮಹಿಳಾ ವಿದ್ಯಾರ್ಥಿಗಳ ಫೋಟೋಗಳನ್ನು ಮಾರ್ಫಿಂಗ್ ಮಾಡುವ ಮೂಲಕ ಅಶ್ಲೀಲ ಚಿತ್ರಗಳನ್ನು ರಚಿಸಿದ್ದಾರೆ ಎಂದು ಆಡಳಿತ ಮಂಡಳಿ ತಿಳಿಸಿದೆ ಎಂದು ಶುಕ್ಲಾ ಹೇಳಿದರು.

ವಿದ್ಯಾರ್ಥಿಗಳಿಂದ ದೂರುಗಳನ್ನು ಸ್ವಿಕರಿಸಿದ ನಂತರ ಸಂಸ್ಥೆಯ ಆಡಳಿತ ಮಂಡಳಿಯು ಆಂತರಿಕ ವಿಚಾರಣೆ ನಡೆಸಿತು. ಅದರ ಸಂಶೋಧನೆಗಳ ಆಧಾರದ ಮೇಲೆ, ಅಲಿಯನ್ನು ಸಂಸ್ಥೆಯಿಂದ ಅಮಾನತುಗೊಳಿಸಲಾಯಿತು ಮತ್ತು ಅವರ ಮೊಬೈಲ್ ಫೋನ್ ಮತ್ತು ಲ್ಯಾಪ್‌ಟಾಪ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ನಂತರ ರಾಖಿ ಪೊಲೀಸ್ ಠಾಣೆಯುಲ್ಲಿ ದೂರು ದಾಖಲಿಸಲಾಗಿದ್ದು, ಅವರ ಕೃತ್ಯವು ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳಿಗೆ ಸಾಮಾಜಿಕ ಮತ್ತು ಮಾನಸಿಕ ಹಾನಿಯನ್ನುಂಟುಮಾಡಿದೆ ಮತ್ತು ಸಂಸ್ಥೆಯ ಖ್ಯಾತಿಗೆ ಸರಿಪಡಿಸಲಾಗದ ಹಾನಿಯನ್ನುಂಟುಮಾಡಿದೆ ಎಂದು ಅಧಿಕಾರಿ ಹೇಳಿದರು.

ಇಲ್ಲಿಯವರೆಗೆ, ಮಾರ್ಫ್ ಮಾಡಿದ ಚಿತ್ರಗಳನ್ನು ಪ್ರಸಾರ ಮಾಡಲಾಗಿದೆ ಅಥವಾ ವೈರಲ್ ಮಾಡಲಾಗಿದೆ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ. ಚಿತ್ರಗಳನ್ನು ಆನ್‌ಲೈನ್‌ನಲ್ಲಿ ಹಂಚಿಕೊಳ್ಳಲಾಗಿದೆ ಎಂದು ಆಡಳಿತ ಮಂಡಳಿಯೂ ಸೂಚಿಸಿಲ್ಲ. ಅಲಿ ವಿರುದ್ಧ ಭಾರತೀಯ ನ್ಯಾಯ ಸಂಹಿತಾ ಮತ್ತು ಐಟಿ ಕಾಯ್ದೆಯು ನಿಬಂಧನೆಗಳ ಸೆಕ್ಷನ್ 352 (ಶಾಂತಿ ಉಲ್ಲಂಘನೆಯನ್ನು ಪ್ರಚೋದಿಸುವ ಉದ್ದೇಶದಿಂದ ಉದ್ದೇಶಪೂರ್ವಕ ಅವಮಾನ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಅವರ ವಿಚಾರಣೆ ನಡೆಯುತ್ತಿದೆ, ಎಂದು ಶುಕ್ಲಾ ಹೇಳಿದರು.

# ಇನ್ನೆರಡು ದಿನದಲ್ಲಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಲಿದ್ದಾರೆ ದೇವೇಗೌಡರು

**ಬೆಂಗಳೂರು, ಅ.10–**ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಆರೋಗ್ಯವಾಗಿದ್ದು, ಇನ್ನೆರಡು ದಿನಗಳಲ್ಲಿ ಡಿಸ್‌ಚಾರ್ಜ್ ಆಗಲಿದ್ದಾರೆ.



ಸೋಮವಾರ ಆಸ್ಪತ್ರೆಗೆ ದಾಖಲಾಗಿದ್ದ ದೇವೇಗೌಡರನ್ನು ನಿನ್ನೆ ತೀವ್ರ ನಿಗಾಘಟಕದಿಂದ ವಾರ್ಡ್‌ಗೆ ಸ್ಥಳಾಂತರಿಸಲಾಗಿದ್ದು, ಗೌಡರು ಆರೋಗ್ಯವಾಗಿದ್ದಾರೆ. ಅವರ ಆರೋಗ್ಯದ ಬಗ್ಗೆ ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದ್ದಾರೆ.

ತಮ ತಂದೆಯವರನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಯಾರೂ ಆತಂಕಪಡುವ ಅಗತ್ಯವಿಲ್ಲ. ತಂದೆಯವರಿಗೆ ಆರೋಗ್ಯದ ಸಮಸ್ಯೆ ಇಲ್ಲ. ಕಳೆದ ಮೂರು ದಿನಗಳಿಂದ ವೈದ್ಯರು ಚಿಕಿತ್ಸೆನೀಡಿದ್ದಾರೆ. ದೇವರ ಮತ್ತು ಜನತೆಯ ಆಶೀರ್ವಾದದಿಂದ ಆರೋಗ್ಯವಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಬೆಂಗಳೂರು ವಾರ್ಡ್ ವಿಭಜನೆ ಬಗ್ಗೆ ನಾಳೆ ಜೆಡಿಎಸ್ ಸಭೆ

**ಬೆಂಗಳೂರು, ಅ.10–** ಗ್ರೆಟರ್ ಬೆಂಗಳೂರು ಅಥಾರಿಟಿಯು ಮಾಡಿರುವ ವಾರ್ಡ್‌ಗಳ ವಿಭಜನೆ ಬಗ್ಗೆ ಜೆಡಿಎಸ್ ಪಕ್ಷದ ಮುಖಂಡರ ಸಭೆ ನಾಳೆ ನಡೆಯಲಿದೆ. ನಾಳೆ ಬೆಳಿಗ್ಗೆ 11 ಗಂಟೆಗೆ ಜೆಪಿ ಭವನದಲ್ಲಿ ಲೋಕ ನಾಯಕ ಜಯಪ್ರಕಾಶ್ ನಾರಾಯಣ್ ಅವರ ಜನದಿನಾಚರಣೆ ಹಮಿಕೊಂಡಿದ್ದು, ಈ ಕಾರ್ಯಕ್ರಮ ಮುಗಿದ ನಂತರ ಸಭೆ ನಡೆಯಲಿದೆ.



ಗ್ರೆ?ಟರ್ ಬೆಂಗಳೂರು ಅಥಾರಿಟಿಯು ಮಾಡಿರುವ ವಾರ್ಡ್‌ಗಳ ವಿಭಜನೆ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅ.15 ಕಡೆಯ ದಿನವಾಗಿದೆ. ಹೀಗಾಗಿ ವಾರ್ಡುಗಳಲ್ಲಿ ಆಗಿರುವ ನ್ಯೂನತೆಗಳನ್ನು ಸರಿಪಡಿಸಲು ಮತ್ತು ಆಕ್ಷೇಪಣೆ ಸಲ್ಲಿಸಲು ಅಭಿಪ್ರಾಯ ಹಾಗೂ ಸಲಹೆಗಳನ್ನು ಪಡೆಯಲು ನಿರ್ಧರಿಸಲಾಗಿದೆ.

ಬೆಂಗಳೂರು ನಗರದ ಶಾಸಕರು, ಮಾಜಿ ಸಚಿವರು, ಮಾಜಿ ಸಂಸದರು, ಮಾಜಿ ಶಾಸಕರು, ಮೇಲುಸ್ತುವಾರಿಗಳು, ಉಸ್ತುವಾರಿಗಳು, ವಿಧಾನಸಭಾ ಕ್ಷೇತ್ರಗಳ ಅಧ್ಯಕ್ಷರು, ವಿವಿಧ ವಿಭಾಗಗಳ ಅಧ್ಯಕ್ಷರು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಅಭ್ಯರ್ಥಿಗಳು, ಬಿಬಿಎಂಪಿ ಮಾಜಿ ಸದಸ್ಯರು, ನಗರ ಪದಾಧಿಕಾರಿಗಳು, ವಾರ್ಡ್ ಅಧ್ಯಕ್ಷರು ಹಾಗೂ ಮುಖಂಡರುಗಳನ್ನು ಸಭೆಗೆ ಆಹ್ವಾನಿಸಲಾಗಿದೆ ಎಂದು ಬೆಂಗಳೂರು ಮಹಾನಗರ ಜೆಡಿಎಸ್ ಅಧ್ಯಕ್ಷ ಎಚ್.ಎಂ.ರಮೇಶ್‌ಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 1 ಗಂಟೆಯಲ್ಲಿ ಫಲಿತಾಂಶ ಬೆಂಗಳೂರು ಉತ್ತರ ವಿವಿ ಸಾಧನೆ

**ಕೋಲಾರ,ಅ,10–**ಕೇವಲ ಆರು ತಿಂಗಳಲ್ಲಿ ಪಿಹೆಚ್‌ಡಿಯ ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ಕೋರ್ಸ್ ವರ್ಕ್ ತರಗತಿಗಳು, ಪರೀಕ್ಷೆಗಳನ್ನು ನಡೆಸಿ, ಕೇವಲ ಒಂದು ಗಂಟೆಯಲ್ಲಿ ಫಲಿತಾಂಶವನ್ನು ನೀಡಿದ್ದಲ್ಲದೇ ಇದೀಗ ಒಂದೇ ದಿನದಲ್ಲಿ ವಿದ್ಯಾರ್ಥಿಗಳಿಗೆ ತಾತ್ಕಾಲಿಕ ನೋಂದಣಿ ದೃಢೀಕರಣ ಪತ್ರಗಳನ್ನು ವಿತರಿಸಿರುವ ದೇಶದ ಮೊದಲ ವಿದ್ಯಾಲಯ ಎಂಬ ಖ್ಯಾತಿಗೆ ಬೆಂಗಳೂರು ಉತ್ತರ ವಿವಿ ಪಾತ್ರವಾಗಿದೆ ಎಂದು ಬೆಂಗಳೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ವೇಣುಗೋಪಾಲ್ ಶ್ಲಾಘಿಸಿದರು.




ಕೋಲಾರದ ಬೆಂಗಳೂರು ಉತ್ತರ ವಿವಿಯ ಪ್ರಧಾನ ಕಚೇರಿಯಲ್ಲಿ 9 ವಿಷಯಗಳ ಪಿಹೆಚ್‌ಡಿ ಕೋರ್ಸಿನ 78 ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡುತ್ತಿದ್ದರು.

ಅತಿ ಕಡಿಮೆ ಅವಧಿಯಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಬೆಂಗಳೂರು ಉತ್ತರ ವಿವಿ ಆಡಳಿತವನ್ನು ಅಭಿನಂದಿಸಿದ ಅವರು, ಇಲ್ಲಿ ವಿವಿಧ ಕೋರ್ಸುಗಳಿಗೆ ನೀಡಿರುವ ಅವಕಾಶ, ಆಡಳಿತ,ಬೋಧನಾ ವೈಖರಿ ಮಾದರಿಯಾಗಿದೆ ಎಂದು ತಿಳಿಸಿ, ಇದರಿಂದಾಗಿ ಸಂಶೋಧನಾರ್ಥಿಗಳು ಅತಿ ಕಡಿಮೆ ಅವಧಿಯಲ್ಲಿ ಕೋರ್ಸ್ ಮುಗಿಸಿ ಡಾಕ್ಟರೇಟ್ ಪಡೆಯಲು ಸಹಕಾರಿಯಾಗಿದೆ ಎಂದರು.ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ.ನಿರಂಜನ ವಾನಳ್ಳಿ ಮಾತನಾಡಿ, ಬೆಂಗಳೂರು ಉತ್ತರ ವಿವಿ ಆರಂಭಗೊಂಡ ನಂತರ ಇದು ಮೊದಲ ಹಾಗೂ ಚೊಚ್ಚಲ ಪಿಹೆಚ್‌ಡಿ ಕಾರ್ಯಕ್ರಮವಾಗಿದೆ, ಈ ಮೊದಲ ಅವಧಿಯಲ್ಲೇ ನಾವು ಹಲವು ದಾಖಲೆ ಮಾಡುವ ತವಕದಲ್ಲಿ ಕೆಲಸ ನಿರ್ವಹಿಸಿದ್ದೇವೆ ಎಂದು ತಿಳಿಸಿದರು.ಪಿಹೆಚ್‌ಡಿ ಮಾಡಲು ಆಯ್ಕೆಯಾಗಿರುವ ಸಂಶೋಧನಾರ್ಥಿಗಳಿಗೆ ಅತ್ಯಂತ ತ್ವರಿತವಾಗಿ ಕೋರ್ಸ್ ವರ್ಕ್ ನಡೆಸಿ ತಾತ್ಕಾಲಿಕ ನೋಂದಣಿ ಪ್ರಮಾಣಪತ್ರಗಳನ್ನು ಒಂದೇ ದಿನದಲ್ಲಿ ವಿತರಿಸುತ್ತಿರುವುದು ಸಂತಸದ ವಿಷಯವಾಗಿದೆ ಎಂದ ಅವರು, ಇದರಿಂದ ನಮ್ಮ ವಿವಿಯಲ್ಲಿ ಸಂಶೋಧನಾ ಕಾರ್ಯ ನಡೆಸುತ್ತಿರುವ ವಿದ್ಯಾರ್ಥಿಗಳು ಅತಿ ಶೀಘ್ರವಾಗಿ ತಮ್ಮ ಸಂಶೋಧನಾ ಕಾರ್ಯವನ್ನು ಮುಗಿಸಿ ಡಾಕ್ಟರೇಟ್ ಪದವಿ ಪಡೆಯಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಾಜರಿದ್ದ ಕುಲಸಚಿವ ಶ್ರೀಧರ್, ಹಣಕಾಸು ಅಧಿಕಾರಿ ವಸಂತಕುಮಾರ್, ಮಂಗಸಂದ್ರ ಸ್ನಾತಕೋತ್ತರ ವಿಭಾಗದ ನಿರ್ದೇಶಕಿ ಪ್ರೊ.ಕುಮುದ ಪಿಹೆಚ್‌ಡಿ ಸಂಶೋಧನಾರ್ಥಿಗಳಿಗೆ ಶುಭ ಕೋರಿದರು. ಕಾರ್ಯಕ್ರಮದಲ್ಲಿ ಮುರಳೀಧರ್ ಸೇರಿದಂತೆ ಪಿಎಚ್‌ಡಿ ಮಾರ್ಗದರ್ಶಕರು, ಸಂಶೋಧನಾ ವಿದ್ಯಾರ್ಥಿಗಳು, ವಿವಿ ಸಿಬ್ಬಂದಿ ಹಾಜರಿದ್ದರು.

# ಧನ್‌ಧಾನ್ಯ ಕೃಷಿ ಯೋಜನೆಗೆ ಗದಗ, ಹಾವೇರಿ ಜಿಲ್ಲೆಗಳ ಸೇರ್ಪಡೆ : ಬೊಮ್ಮಾಯಿ ಅಭಿನಂದನೆ



**ಹಾವೇರಿ,ಅ.10–**ಸಮಗ್ರ ಕೃಷಿ ಅಭಿವೃದ್ಧಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಧನ್‌ಧಾನ್ಯ ಕೃಷಿ ಯೋಜನೆ (ಪಿಎಂಡಿಡಿಕೆವೈ) ರೂಪಿಸಿದ್ದು ರಾಷ್ಟದ 100 ಜಿಲ್ಲೆಯಲ್ಲಿ ಇದು ಅನುಷ್ಠಾನವಾಗುತ್ತಿದೆ. ಅದರಲ್ಲಿ ಹಾವೇರಿ ಲೋಕಸಭಾ ಕ್ಷೇತ್ರಕ್ಕೆ ಸೇರಿರುವ ಗದಗ, ಹಾವೇರಿ ಜಿಲ್ಲೆ ಎರಡನ್ನೂ ಸೇರಿಸಿರುವುದಕ್ಕೆ ಮೋದಿ ಹಾಗೂ ಕೇಂದ್ರ ಕೃಷಿಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮಾಯಿ ಅಭಿನಂದನೆ ಸಲ್ಲಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಈ ಯೋಜನೆಯಡಿ ಕೃಷಿ ಉತ್ಪನ್ನ ಹೆಚ್ಚಿಸುವುದು ವಿವಿಧ ದವಸ ಧಾನ್ಯಗಳನ್ನು ಬೆಳೆಯುವುದು ಮತ್ತು ಸಮಗ್ರ ಕೃಷಿ ಅಭಿವೃದ್ಧಿ, ನೀರಾವರಿ ಸೌಲಭ್ಯ, ರೈತರಿಗೆ ಅಲ್ಪಾವಧಿ, ದೀರ್ಘಾವಧಿ ಹಣ ಕಾಸು ನೆರವು ಮತ್ತು ಸುಗ್ಗಿ ಬಳಿಕ ಪಂಚಾಯತ್ ಮತ್ತು ಬ್ಲಾಕ್ ಹಂತದಲ್ಲಿ ದವಸಧಾನ್ಯಗಳ ದಾಸ್ತಾನು ನಿರ್ಮಾಣ, ಕೇಂದ್ರ ಕೃ ಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳನ್ನು ಸಂ ಯೋಜನೆಗೊಳಿಸಿ ಸಮಗ್ರವಾಗಿ ಕಾರ್ಯಕ್ರಮಗಳ ಅನುಷ್ಠಾನ ಸೇರಿ ಸಮಗ್ರ ಕೃಷಿ ಅಭಿವೃದ್ಧಿಗೆ ಕೇಂದ್ರ ಸರ್ಕಾರ ನಮೆರಡು ದೊಡ್ಡ ಸಹಾಯ ಜಿಲ್ಲೆಗೆ ಮಾಡುತ್ತದೆ ಎಂದು ಹೇಳಿದ್ದಾರೆ.

ನಾಳೆ ಪ್ರಧಾನಿ ನರೇಂದ್ರಮೋದಿ ಅವರು ಹಾವೇರಿ ಜಿಲ್ಲೆಯ ಹನುಮನಮಟ್ಟಿಯ ಕೃಷಿ ವಿದ್ಯಾಲಯ ಕೇಂದ್ರದಲ್ಲಿ ಈ ಯೋಜನೆಯನ್ನು ವರ್ಚ್ಯುವಲ್ ಮೂಲಕ ಉದ್ಘಾಟಿಸಲಿದ್ದಾರೆ.ಎಲ್ಲ ರೈತ ಬಾಂಧವರು ಪಾಲ್ಗೊಳ್ಳಬೇಕೆಂದು ಬೊಮಾಯಿ ವಿನಂತಿಸಿಕೊಂಡಿದ್ದಾರೆ.

# ಮಕ್ಕಳಿಬ್ಬರನ್ನು ಕೊಂದು ತಾಯಿ ಆತ್ಮಹತ್ಯೆ



**ಬೆಂಗಳೂರು,ಅ.10–** ಐದು ವರ್ಷದ ಪುತ್ರಿ ಹಾಗು ಒಂದುವರೆ ವರ್ಷದ ಪುತ್ರನ ಕೊಂದು ತಾಯಿ ಆತ್ಮಹತ್ಯೆಗೆ ಶರಣಾಗಿರುವ ಹೃದಯ ವಿದ್ರಾವಕ ಘಟನೆ ಬಾಗಲಗುಂಟೆಯ ಭುವನೇಶ್ವರಿನಗರದಲ್ಲಿ ಸಂಭವಿಸಿದೆ.ನಾಲ್ಕು ವರ್ಷದ ಪುತ್ರಿ ಬೃಂದಾ ಹಾಗೂ ಒಂದೂವರೆ ವರ್ಷದ ಭುವನ್ ಕೊಂದು ತಾಯಿ ವಿಜಯಲಕ್ಷ್ಮಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಐದು ವರ್ಷದ ಹಿಂದೆ ವಿಜಯಲಕ್ಷ್ಮಿ, ರಮೇಶ್ ಜೊತೆ ಮದುವೆ ಮಾಡಿಕೊಂಡಿದ್ದರು ಆಕೆಯ ಪತಿ ಮಾಲ್‌ನಲ್ಲಿ ಕೆಲಸ ಮಾಡುತ್ತಿದ್ದ. ಬೆಂಗಳೂರಲ್ಲಿ ನೆಲೆಸಿದ್ದ ಈ ದಂಪತಿಗೆ 4 ವರ್ಷದ ಬೃಂದಾ, ಒಂದೂವರೆ ವರ್ಷದ ಭುವನ್ ಎಂಬ ಇಬ್ಬರು ಮಕ್ಕಳಿದ್ದರು. ಇವರ ಸಂಸಾರದಲ್ಲಿ ಕೆಲ ಸಮಸ್ಯೆಗಳಿದ್ದವು, ಕೌಟುಂಬಿಕ ಸಮಸ್ಯೆಯಿಂದ ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ನಿನ್ನೆ ವಿಜಯಲಕ್ಷ್ಮಿ ತಂಗಿ ಮನೆಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಮೃತ ದೇಹಗಳನ್ನು ಮರಣೋತ್ತರ ಪರೀಕ್ಷೆಗೆಂದು ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಈ ಸಂಬಂಧ ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ತಾನು ಮತ್ತೊಂದು ಮದುವೆಯಾಗಿದ್ದು, ಡೈವೋರ್ಸ್ ಕೊಡುವಂತೆ ಪತ್ನಿಗೆ ಪತಿ ರಮೇಶ್ ಬೆದರಿಕೆ ಹಾಕುತ್ತಿದ್ದ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಹೀಗಾಗಿ ಪದೇ ಪದೆ ಕುಟುಂಬದಲ್ಲಿ ಜಗಳ ಆಗುತ್ತಿತ್ತು.

ತಾನು ಮತ್ತೊಂದು ಮದುವೆಯಾಗಿದ್ದು, ಡೈವೋರ್ಸ್ ಕೊಡುವಂತೆ ಪತ್ನಿಗೆ ಪತಿ ರಮೇಶ್ ಬೆದರಿಕೆ ಹಾಕುತ್ತಿದ್ದ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಹೀಗಾಗಿ ಪದೇ ಪದೆ ಕುಟುಂಬದಲ್ಲಿ ಜಗಳ ಆಗುತ್ತಿತ್ತು. ಈ ವಿಚಾರ ವಿಜಯಲಕ್ಷ್ಮಿ ತನ್ನ ಕುಟುಂಬಸ್ಥರ ಬಳಿ ಹೇಳಿಕೊಂಡಿದ್ದಳು ಎನ್ನಲಾಗುತ್ತಿದೆ. ಇದರಿಂದಲೇ ನೊಂದು ತನ್ನ ಮಕ್ಕಳನ್ನು ಕೊಂದು ವಿಜಯಲಕ್ಷ್ಮಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ.ಈ ಸಂಬಂಧ ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೆಮ್ಮು ಸಿರಪ್: ಸಿಬಿಐ ತನಿಖೆ ಕೋರಿದ್ದ ಅರ್ಜಿ ವಜಾ



**ನವದೆಹಲಿ,ಅ.10–**ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ವಿಷಕಾರಿ ಕೆಮ್ಮಿನ ಸಿರಪ್ ಸೇವಿಸಿ ಮಕ್ಕಳು ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಸಿಬಿಐ ತನಿಖೆಗೆ ಒತ್ತಾಯಿಸಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಸಲ್ಲಿಸಲಾಗಿತ್ತು, ಆದರೆ ನ್ಯಾಯಾಲಯ ಅದನ್ನು ತಿರಸ್ಕರಿಸಿದೆ. ಸುಪ್ರೀಂ ಕೋರ್ಟ್ ಅರ್ಜಿಯನ್ನು ಆಲಿಸಿದೆ ಆದರೆ ಸಿಬಿಐ ತನಿಖೆ ಕೋರಿಕೆಯನ್ನು ತಿರಸ್ಕರಿಸಿದೆ.

ತನಿಖೆ ಮತ್ತು ಔಷಧ ಸುರಕ್ಷತಾ ಕಾರ್ಯವಿಧಾನದಲ್ಲಿ ವ್ಯವಸ್ಥಿತ ಸುಧಾರಣೆಗಳನ್ನು ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ಶುಕ್ರವಾರ ವಜಾಗೊಳಿಸಿದೆ.ಸುಪ್ರೀಂ ಕೋರ್ಟ್ ಅರ್ಜಿಯನ್ನು ವಿಚಾರಣೆಗೆ ತೆಗೆದುಕೊಳ್ಳಲು ನಿರಾಕರಿಸಿದೆ.ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದ ನಂತರ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ, ನ್ಯಾಯಮೂರ್ತಿ ಉಜ್ವಲ್ ಭೂಯಾನ್ ಮತ್ತು ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠವು ವಕೀಲ ವಿಶಾಲ್ ತಿವಾರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಜಾಗೊಳಿಸಿದೆ.

ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಅರ್ಜಿಯನ್ನು ವಿರೋಧಿಸಿ, ಇದು ಕೇವಲ ಪತ್ರಿಕಾ ವರದಿಗಳನ್ನು ಆಧರಿಸಿದೆ ಎಂದು ಹೇಳಿದ್ದಾರೆ. ಅರ್ಜಿದಾರರಿಗೆ ಘಟನೆಗೆ ಸಂಬಂಧಿಸಿದ ಯಾವುದೇ ದಾಖಲೆಗಳು ಅಥವಾ ಪುರಾವೆಗಳ ಕೊರತೆಯಿದೆ ಅರ್ಜಿಯನ್ನು ಪರಿಗಣಿಸಬಾರದು ಎಂದು ವಾದಿಸಿದ್ದಾರೆ.. ಆರಂಭದಲ್ಲಿ ನೋಟಿಸ್ ಜಾರಿ ಮಾಡಬೇಕೆಂದು ಪೀಠ ಅಭಿಪ್ರಾಯಪಟ್ಟಿತ್ತು, ಆದರೆ ನಂತರ ಅರ್ಜಿಯನ್ನು ವಜಾಗೊಳಿಸಿದೆ. ರಾಜ್ಯಗಳಲ್ಲಿ ಸೂಕ್ತ ಕಾನೂನು ಕಾರ್ಯವಿಧಾನಗಳು ಮೆಹ್ತಾ ಅವರು ಪ್ರಸ್ತುತ ಯಾವುದೇ ರಾಜ್ಯವನ್ನು ಪ್ರತಿನಿಧಿಸುತ್ತಿಲ್ಲ ಎಂದು ಹೇಳಿದ್ದಾರೆ.ಅರ್ಜಿದಾರರು ಈಗಾಗಲೇ 10 ಇತರ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಗಳನ್ನು ಸಲ್ಲಿಸಿದ್ದಾರೆ ಎಂದು ತಿಳಿದ ನಂತರ, ನ್ಯಾಯಾಲಯವು ಹೊಸ ಅರ್ಜಿಯನ್ನು ವಜಾಗೊಳಿಸಿದೆ.

# ಆಫ್ಘಾನ್ ಸ್ವಾತಂತ್ರ್ಯ ರಕ್ಷಣೆಗೆ ಭಾರತ ಬದ್ಧ

**ನವದೆಹಲಿ,ಅ.10–** ಆಫ್ಘಾನಿಸ್ತಾನದ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರ್ಯಕ್ಕೆ ' ರಕ್ಷಣೆಗೆ ಭಾರತ ಬದ್ಧವಾಗಿದೆ' ಎಂದು ಹೇಳಿದ ವಿದೇಶಾಂಗ ಸಚಿವ ಡಾ. ಎಸ್ ಜೈಶಂಕರ್, ಪಾಕಿಸ್ತಾನದ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದಾರೆ ತೆಹ್ರಿಕ್–ಎ–ತಾಲಿಬಾನ್ ಪಾಕಿಸ್ತಾನ್ ಅಡಗುತಾಣಗಳನ್ನು ಗುರಿಯಾಗಿಸಿಕೊಂಡು ಕಾಬೂಲ್‌ನಲ್ಲಿ ಪಾಕಿಸ್ತಾನ ವಾಯುದಾಳಿ ನಡೆಸಿದ ಒಂದು ದಿನದ ನಂತರ ಜೈ ಶಂಕರ್ ನೀಡಿರುವ ಹೇಳಿಕೆ ಮಹತ್ವ ಪಡೆದುಕೊಂಡಿದೆ.

ಆಫ್ಘಾನಿಸ್ತಾನದ ವಿದೇಶಾಂಗ ಸಚಿವ ಅಮೀರ್‌ಖಾನ್ ಮುತಾಕಿ ಅವರನ್ನು ಭೇಟಿ ವೇಳೆ ಸುದ್ದಿಗಾರೊಂದಿಗೆ ಮಾತನಾಡಿದ ಸಚಿವ ಜೈಶಂಕರ್, ಅಫ್ಘಾನಿಸ್ತಾನದ ಅಭಿವೃದ್ಧಿ ಮತ್ತು ಪ್ರಗತಿಯಲ್ಲಿ ಭಾರತಕ್ಕೆ 'ಆಳವಾದ ಆಸಕ್ತಿ' ಇದೆ ಎಂದು ಹೇಳಿದ್ದಾರೆಭಾರತ–ಅಫ್ಘಾನಿಸ್ತಾನದ ದೀರ್ಘಕಾಲದ ಪಾಲುದಾರಿಕೆಯನ್ನು ಪುನರುಚ್ಚರಿಸಿದ ಅವರು ವಿದೇಶಾಂಗ ಸಚಿವರ ಭೇಟಿ ಭಾರತ–ಅಫ್ಘಾನಿಸ್ತಾನದ ನಡುವಿನ ಸಂಬಂಧಗಳನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆಈ ಹಿಂದೆ, ವಿಶೇಷವಾಗಿ ಕೋವಿಡ್–19 ಸಾಂಕ್ರಾಮಿಕ ಸಮಯದಲ್ಲಿ ಭಾರತ, ಅಫ್ಘಾನಿಸ್ತಾನಕ್ಕೆ ಹೇಗೆ ಸಹಾಯ ಮಾಡಿದೆ ಎಂಬುದನ್ನು ಅವರು ವಿವರಿಸಿದ ಅವರು ಅಗತ್ಯವಿರುವ ಎಲ್ಲಾ ಮಾನವೀಯ ನೆರವು ನೀಡಿದೆ. ಭಾರತ, ಅಫ್ಘಾನಿಸ್ತಾನಕ್ಕೆ ಸಹಾಯ ಮಾಡುವುದನ್ನು ಮುಂದುವರಿಸುತ್ತದೆ ಎಂದು ತಿಳಿಸಿದ್ದಾರೆ

ಆಫಘಾನಿಸ್ತಾನಕ್ಕೆ ಎಂಆರ್ ಐ ಮತ್ತು ಸಿಟಿ ಸ್ಕ್ಯಾನ್ ಯಂತ್ರಗಳನ್ನು ಒದಗಿಸುತ್ತದೆ ಮತ್ತು ರೋಗನಿರೋಧಕ ಶಕ್ತಿ ಮತ್ತು ಕ್ಯಾನ್ಸರ್ ಔಷಧಿಗಳಿಗೆ ಲಸಿಕೆಗಳನ್ನು ತಲುಪಿಸುತ್ತದೆ ಎಂದು ಅವರು ಹೇಳಿದ್ದಾರೆ.ಕಳೆದ ತಿಂಗಳು ಸಂಭವಿಸಿದ ದುರಂತದ ಕೆಲವೇ ಗಂಟೆಗಳಲ್ಲಿ ಭಾರತೀಯ ಪರಿಹಾರ ಸಾಮಗ್ರಿಗಳನ್ನು ಭೂಕಂಪದ ಸ್ಥಳಗಳಿಗೆ ತಲುಪಿಸಲಾಯಿತು" "ಪೀಡಿತ ಪ್ರದೇಶಗಳಲ್ಲಿನ ನಿವಾಸಗಳ ಪುನರ್ನಿರ್ಮಾಣಕ್ಕೆ ಕೊಡುಗೆ ನೀಡಲು ಬಯಸುತ್ತೇವೆ." "ಭಾರತ ಆಫ್ಘಾನ್ ಜನರಿಗೆ ಆಹಾರ ಸಹಾಯವನ್ನು ನೀಡುವಲ್ಲಿ ಗಮನಾರ್ಹ ಪಾತ್ರ ವಹಿಸಿದೆ. ಮತ್ತಷ್ಟು ಆಹಾರ ಸಾಮಗ್ರಿಗಳನ್ನು ತಲುಪಿಸಲಾಗುವುದು" ಎಂದು ಅವರು ತಿಳಿಸಿದ್ದಾರೆ.

ಅಫಘಾನ್ ನಿರಾಶ್ರಿತರನ್ನು ವಾಪಸ್ ಕಳುಹಿಸುವ ಬಗ್ಗೆ ಕಳವಳ ವ್ಯಕ್ತಪಡಿಸಿದ ವಿದೇಶಾಂಗ ಸಚಿವರು ವರಿಗೆ ನಿವಾಸಗಳನ್ನು ನಿರ್ಮಿಸಲು ಸಹಾಯ ಮಾಡಲು ಮತ್ತು ಅವರ ಜೀವನವನ್ನು ಪುನರ್ನಿರ್ಮಿಸಲು ವಸ್ತು ನೆರವು ನೀಡುವುದನ್ನು ಮುಂದುವರಿಸಲು ಭಾರತ ಒಪ್ಪಿಕೊಂಡಿದೆ ಎಂದಿದ್ದಾರೆ.ಅಫ್ಘಾನಿಸ್ತಾನದಲ್ಲಿ ಗಣಿಗಾರಿಕೆ ಅವಕಾಶಗಳನ್ನು ಅನ್ವೇಷಿಸಲು ಭಾರತೀಯ ಕಂಪನಿಗಳನ್ನು ಆಹ್ವಾನಿಸಿದ್ದಕ್ಕಾಗಿ ಅವರು ಮುತ್ತಕಿ ಅವರಿಗೆ ಧನ್ಯವಾದ ಅರ್ಪಿಸಿದರು.ಭಾರತ ಏಪ್ರಿಲ್ 2025 ರಲ್ಲಿ ಅಫ್ಘಾನ್ ಜನರಿಗೆ ಹೊಸ ವೀಸಾ ಪರಿಚಯಿಸಿದೆ. ಇದರ ಪರಿಣಾಮವಾಗಿ, ಈಗ ವೈದ್ಯಕೀಯ, ವ್ಯಾಪಾರ ಮತ್ತು ವಿದ್ಯಾರ್ಥಿ ವಿಭಾಗಗಳನ್ನು ಒಳಗೊಂಡಂತೆ ಹೆಚ್ಚಿನ ಸಂಖ್ಯೆಯ ವೀಸಾಗಳನ್ನು ನೀಡುತ್ತಿದ್ದೇವೆ" ಎಂದು ಅವರು ತಿಳಿಸಿದ್ದಾರೆ.ಕಾಬೂಲ್‌ನಲ್ಲಿ ಭಾರತ ತನ್ನ ರಾಯಭಾರ ಕಚೇರಿಯನ್ನು ಮತ್ತೆ ತೆರೆಯಲಿದೆ. ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ನಿಕಟ ಸಹಕಾರ ನಂತರದ "ರಾಷ್ಟ್ರೀಯ ಅಭಿವೃದ್ಧಿಗೆ, ಪ್ರಾದೇಶಿಕ ಸ್ಥಿರತೆ ಮತ್ತು ಸ್ಥಿತಿಸ್ಥಾಪಕತ್ವಕ್ಕೆ" ಕೊಡುಗೆ ನೀಡುತ್ತದೆ ಎಂದು ಹೇಳಿದರು.

ಯುವ ಮಾರ್ಗ

ಶನಿವಾರ: 11–10–2025

## ಪಕ್ಷಿ ಪ್ರೇಮಿ ಸಲಾವುದ್ದೀನ್ ರವರಿಗೆ ಇಂದಿರಾ ಪ್ರಿಯದರ್ಶಿನಿ ರಾಜ್ಯಮಟ್ಟದ ಪರಿಸರ ಪ್ರಶಸ್ತಿ.



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.10–** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ ಅಂಗವಾಗಿ ಬಳ್ಳಾರಿಯಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಅರಣ್ಯ, ಜೀವವೈವಿಧ್ಯತೆ, ಪರಿಸರ ಸಚಿವ ಈಶ್ವರ್ ಖಂಡ್ರೆ ರವರು ಮಾನ್ವಿಯ ಪರಿಸರ, ಪಕ್ಷಿ ಸಂರಕ್ಷಕ ಸಲ್ಲಾಹುದ್ದೀನ್ ರವರಿಗೆ ಇಂದಿರಾ ಪ್ರಿಯದರ್ಶಿನಿ ರಾಜ್ಯಮಟ್ಟದ ಪರಿಸರ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು

## ಅಕ್ಟೋಬರ್ 13ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

**ರಾಯಚೂರು,ಅ.10–**ಇಲ್ಲಿನ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾನಸಿಕ ಆರೋಗ್ಯ ವಿಭಾಗ ರಾಯಚೂರು, ರಿಮ್ಸ್, ಮತ್ತು ನವೋದಯ ಮಹಾವಿದ್ಯಾಲಯ, ಭಾರತೀಯ ಮನೋವೈದ್ಯಕೀಯ ಸಂಘ, ಕರ್ನಾಟಕ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಾನವೀಯ ತುರ್ತು ಪರಿಸ್ಥಿತಿಗಳಲ್ಲಿ ಮಾನಸಿಕ ಆರೋಗ್ಯ ಸೇವೆಗಳು ಎಂಬ ಘೋಷವಾಕ್ಯದಡಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ಕೃಷ್ಣಾ ಸಭಾಂಗಣದಲ್ಲಿ ಅಕ್ಟೋಬರ್ 13ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ.ಸಿ.ಬಾಗಡೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿಗಳಾದ ನಿತೀಶ್.ಕೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹನುಮಂತ.ಎ.ಸಾತ್ವಿಕ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯಕ್ತರಾದ ಜುಬಿನ್ ಮೋಹಪಾತ್ರ ಅವರು ಆಗಮಿಸಲಿದ್ದಾರೆ.

ಅತಿಥಿಗಳಾಗಿ ರಿಮ್ಸ ನಿರ್ದೇಶಕರಾದ ಡಾ.ರಮೇಶ ಬಿ.ಹೆಚ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ, ನವೋದಯ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಬಿ.ದೇವಾನಂದ, ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಅನಿತಾ ಎಸ್.ಹಿರೇಮನಿ ಆಗಮಿಸಲಿದ್ದಾರೆ.

### ಎರಡು ವರ್ಷದ ಬಿ.ಇಡಿ ಕೋರ್ಸ್ಗೆ ಅರ್ಜಿ ಆಹ್ವಾನ

**ರಾಯಚೂರು,ಅ.10–**ರಾಯಚೂರಿನ ಯರಮರಸ್ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಡಯಟ್‌ನಿಂದ 2025–26ನೇ ಸಾಲಿನ ಎರಡು ವರ್ಷಗಳ ಬಿ.ಇಡಿ ಕೋರ್ಸ್ಗೆ ಸರ್ಕಾರಿ ಕೋಟಾದ ಸೀಟುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ: www.schooleducation.kar.nic.in (CA CELL) ಎರಡು ವರ್ಷಗಳ ಬಿ.ಇಡಿ ಕೋರ್ಸ್ಗೆ ಅಂತರ್ಜಾಲದ ಮುಖಪುಟದಲ್ಲಿ ಪ್ರಕಟವಾಗುವ Online Application For Admission to 2 YEAR Bed Course For The Year 2025–26 ಲಿಂಕ್ ಮೂಲಕ ಅರ್ಜಿಯನ್ನು ನವಂಬರ್ 03ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಯಟ್ ಹಿರಿಯ ಉಪನ್ಯಾಸಕರಾದ ಶಿವಮ್ಮ ಅವರು ಮೊಬೈಲ್ ಸಂಖ್ಯೆ: 9113926376ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಭಿವೃದ್ಧಿ ವಿಭಾಗದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಅಕ್ಟೋಬರ್ 10 (ಕರ್ನಾಟಕ ವಾರ್ತೆ):** ನಗರದ ಸರ್ಕಾರಿ ಐಟಿಐಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಆಪ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

10ನೇ ತರಗತಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿಯನ್ನು ನೇರವಾಗಿ ಸಂಸ್ಥೆಗೆ ಅಕ್ಟೋಬರ್ 17ರೊಳಗಾಗಿ ಸಲ್ಲಿಸಬಹುದಾಗಿದೆ.

ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಾಧ್ಯಾಪಕರಿಂದ ಸಹಿ ಪಡೆದಿರುವ 10ನೇ ತರಗತಿಯಲ್ಲಿ ಉತ್ತೀರ್ಣರಾದ ಅಂಕಪಟ್ಟಿ, ಇತ್ತೀಚಿನ 2 ಭಾವಚಿತ್ರ, ಜಾತಿ ಆದಾಯ ಪ್ರಮಾಣ ಪತ್ರದ ಪ್ರತಿಗಳನ್ನು ಕಡ್ಡಾಯ ಸಲ್ಲಿಸಬೇಕು. 371(ಜೆ) ಪ್ರಮಾಣ ಪತ್ರ, ಗ್ರಾಮೀಣ ಮತ್ತು ವ್ಯಾಸಂಗ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಭೇಟಿ ನೀಡಬಹುದಾಗಿದೆ ಎಂದು ರಾಯಚೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸ ಜೀವನ ನಡೆಸಲು ಶಿಬಿರ ಸಹಕಾರಿ : ದಿನೇಶ ಪೂಜಾರಿ



**ಭಾಲ್ಕಿ,ಅ.10–**ವ್ಯಸನಗಳಿಗೆ ದಾಸರಾದಂತಹವರು ಹೊಸ ಜೀವನ ನಡೆಸಲು ಮದ್ಯವರ್ಜನ ಶಿಬಿರ ಸಹಕಾರಿಯಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕ ದಿನೇಶ ಪೂಜಾರಿ ಹೇಳಿದರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಗುರುವಾರ ಆಯೋಜಿಸಿದ್ದ ನವಜೀವನ ಸಮಿತಿ ರಚನೆ ಮತ್ತು ಆತ್ಮಾವಲೋಕನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಬಿರಕ್ಕೆ ಆಗಮಿಸಿ ಹೊಸ ಜೀವನ ನಡೆಸಲು ಬಂದಿರುವ ಎಲ್ಲಾ ಶಿಬಿರಾರ್ಥಿಗಳು ಉತ್ತಮ ಜೀವನ ನಡೆಸಲು ಮುನ್ನುಡಿ ಬರೆಯಬೇಕು. ಕುಡಿತ ಎನ್ನುವುದು ಮಾರಕ ರೋಗವಾಗಿದೆ. ಮಾಡಿದ ತಪ್ಪನ್ನು ತಿದ್ದುಕೊಳ್ಳುವುದಕ್ಕೆ ಶಿಬಿರಾಧಿಕಾರಿಗಳು ನೀಡಿದ ಮಾರ್ಗದರ್ಶನ ನಿಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಿರೆಂದು ನಂಬಿರುವೆ. ಮುಂದೆ ನೀವು ನಿಮ್ಮ ಮನೆಗೆ ಹೋದ ನೊಂತರ ಕುಡಿತ ಬಿಡುತ್ತೇನೆ ಎನ್ನುವ ಗಟ್ಟಿ ನಿರ್ಧಾರ ಕೈಗೊಳ್ಳಬೇಕು ಎಂದು ಹೇಳಿದರು.

1995ನೇ ಮಧ್ಯವರ್ಜನ ಶಿಬಿರದ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ಸುಬಾಷ ಹಲಸೂರೆ ಮಾತನಾಡಿ, ನಿಮಗೆ ಯಾವುದೇ ಸಮಸ್ಯೆ ಬಂದರು ಅದಕ್ಕೆ ಪರಿಹಾರ ಕಂಡುಕೊಳ್ಳಿ, ಹೊರತು ಮದ್ಯಪಾನ ಮಾಡುವುದರಿಂದ ಯಾವುದೇ ಸಮಸ್ಯ ಪರಿಹರಿಸಲು ಸಾಧ್ಯವಿಲ್ಲ ಎನ್ನುವುದು ಅರಿತು ಜೀವನ ಸಾಗಿಸಿ ಎಂದು ಹೇಳಿದರು. ಕೇಂದ್ರ ಕಚೇರಿ ಶುದ್ಧಗಂಗಾ ಯೋಜನಾಧಿಕಾರಿ ಫಕೀರಪ್ಪ ಬೆಲ್ಲಾಮುದ್ದಿ ಮಾತನಾಡಿ, ನಿಮ್ಮ ಪುಣ್ಯದ ಪಲದಿಂದಲೇ ಇಂತಹ ಶಿಬಿರದಲ್ಲಿ ಪಾಲ್ಗೊಳ್ಳಲು ನಿಮಗೆ ಅವಕಾಶ ದೊರೆತಿದೆ. ಹೀಗಾಗಿ ನೀವೆಲ್ಲರೂ ಈ ಶಿಬಿರದ ಸಂಪೂರ್ಣ ಲಾಭ ಪಡೆದುಕೊಳ್ಳಬೇಕು ಎಂದು ಹೇಳಿದರು.

ಶಿಬಿರಾಧಿಕಾರಿ ಕುಮಾರ.ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕು ಯೋಜನಾಧಿಕಾರಿ ಸಂತೋಷ ನಾಯಕ, ಪ್ರಮುಖರಾದ ಶಿವಾನಂದ ಲಕಾಟಿ, ರಾಜು.ಪಿ, ಸೇವಾ ಪ್ರತಿನಿಧಿ ಪ್ರೆಸಿಲ್ಲ ಡಿಸೋಜ, ನಿರಂಜಪ್ಪ ಪಾತ್ರೆ, ಸಂತೊಷ ಬಿಜಿಪಾಟೀಲ, ಪಿ.ಕೆ.ಪಲ್ಲವಿ, ಶ್ರೀಕಾಂತ ಸೇಗುಣಸಿ, ವೀರಭದ್ರ ಹಲಬುರ್ಗೆ, ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಉಪಸ್ಥಿತರಿದ್ದರು. ವೀರೇಶ ಸ್ವಾಗತಿಸಿದರು. ಸಂತೋಷಕುಮಾರ ನಿರೂಪಿಸಿದರು. ಶಿವಾನಂದ ವಂದಿಸಿದರು.

# ಶೂ ಎಸೆತ ಆರೋಪಿಗೆ ಕಠಿಣ ಶಿಕ್ಷೆಗೊಳಪಡಿಸಲು ದಲಿತ ಪರ ಸಂಘಟನೆ ಆಗ್ರಹ




**ಭಾಲ್ಕಿ ,ಅ.10–** ಸುಪ್ರೀಮ್ ಕೋರ್ಟ್ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮೇಲೆ ಶೂ ಎಸೆತ ಪ್ರಕರಣ ಖಂಡಿಸಿ ಶೂ ಎಸೆದ ಆರೋಪಿಗೆ ಕಠಿಣ ಶಿಕ್ಷೆಗೊಳಪಡಿಸಲು ಆಗ್ರಹಿಸಿ ವಿವಿಧ ದಲಿತ ಪರ ಸಂಘಟನೆಯವರು ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳಿಗೆ ಬರೆದ ಮನವಿ ಪತ್ರ ದಲಿತ ಮುಖಂಡ ಪ್ರಶಾಂತ ಕೋಟಗೇರಾ ನೇತೃತ್ವದಲ್ಲಿ ತಹಸೀಲ್ದಾರಿಗೆ ಸಲ್ಲಿಸಿದರು.

ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಮುಂಜಾನೆ ವಿವಿಧ ದಲಿತ ಪರ ಸಂಘಟನೆಯವರು ಸೇರಿ,ಅಲ್ಲಿಂದ ಪ್ರತಿಭಟನೆ ರ್ಯಾಲಿ ಆರಂಭಿಸಿ ಮಹಾತ್ಮಾಗಾಂಧಿ ವೃತ್ತ,ಬಸವೇಶ್ವರ ವೃತ್ತ ಮೂಲಕ ತಹಸೀಲ ಕಛೇರಿಗೆ ತಲುಪಿದರು.

ರ್ಯಾಲಿಯುದ್ದಕ್ಕೂ ಶೂ ಎಸೆದ ಆರೋಪಿ ವಕೀಲ್ ರಾಕೇಶ ಕಿಶೋರ ಧಿಕ್ಕಾರ,ಧಿಕ್ಕಾರ ಎಂದು ಕೂಗೂತ್ತಾ,ಅವನು ಮಾಡಿದ ಹೇ ಕೃತ್ಯ ಭಾರತದ ನ್ಯಾಯಾಂಗ ವ್ಯವಸ್ಥೆಯಲ್ಲಿ ಒಂದು ಅಕ್ಷಮ್ಯ ಅಪರಾಧವಾಗಿದೆ.ದೇಶದ ಸಂವಿಧಾನಕ್ಕೆ ಮಾಡಿದ ಅವಮಾನವಾಗಿದೆ.ಕಾರಣ ಹೀನ ಮನಸ್ಸಿನ ಆರೋಪಿಯನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರಶಾಂತ ಕೋಟಗೇರಾ ತಿಳಿಸಿದರು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ಸಂಚಾಲಕ ಶಿವಕುಮಾರ ಮೇತ್ರೆ,ಮುಖಂಡರಾದ ವಿಶ್ವನಾಥ ಮೋರೆ,ಅಶೋಕ ಗಾಯಕವಾಡ,ಮಲ್ಲಿಕಾರ್ಜುನ ನೆಳಗೆ,ರೋಹನ ಶಿಂದೆ, ಗಗನ ಫುಲೆ,ಪ್ರದೀಪ ಮೊರೆ,ಸಿದ್ಧಾರ್ಥ ಪ್ಯಾಗೆ,ರಾಜಕುಮಾರ ಮೋರೆ,ವಿಲಾಸ ಅರ್ಜುನ, ರಾಜಕುಮಾರ ಭಾಟಸಾಂಗವೆ,ಉತ್ತಮ ಶಿಂದೆ,ರಾಜಕುಮಾರ ಭಟಾರೆ,ಫಾಳೆಪ್ಪ ಮೈಲಾರೆ,ಸುರೇಶ ಮೋರೆ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ನೂತನ ಕಾರ್ಮಿಕ ಭವನ ಲೋಕಾರ್ಪಣೆ

**ತುಮಕೂರು, ಅ. 10–** ನಗರದ ಹನುಮಂತಪುರದ ಗಣೇಶನಗರದಲ್ಲಿ 3.20 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಕಾರ್ಮಿಕ ಭವನವನ್ನು ಕಾರ್ಮಿಕ ಸಚಿವ ಸಂತೋಷ ಎಸ್.ಲಾಡ್ ಲೋಕಾರ್ಪಣೆ ಮಾಡಿದರು.

ನಂತರ ಮಾತನಾಡಿದ ಅವರು, ಸರ್ಕಾರವು ಕಾರ್ಮಿಕರ ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ವಸತಿ ಸೌಲಭ್ಯಗಳಿಗೆ ಹೆಚ್ಚು ಪ್ರಾಮುಖ್ಯತೆ ನೀಡುತ್ತಿರುವ ನಿಟ್ಟಿನಲ್ಲಿ,

ಈ ಕಾರ್ಮಿಕ ಭವನವನ್ನು ನಿರ್ಮಿಸಲಾಗಿದ್ದು, ಭವನವು ಮುಂದಿನ ದಿನಗಳಲ್ಲಿ ಕಾರ್ಮಿಕರ ಸಭೆ, ತರಬೇತಿ ಶಿಬಿರಗಳಿಗೆ ಉತ್ತಮ ವೇದಿಕೆಯಾಗಿ ಉಪಯೋಗವಾಗಲಿದೆ ಎಂದು ತಿಳಿಸಿದರು. ಕಾರ್ಮಿಕ ವರ್ಗದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಹಲವಾರು ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದು, ಕಾರ್ಮಿಕರು ಯೋಜನೆಗಳ ಸದುಪಯೋಗ ಪಡೆಯಬೇಕು ಎಂದು ಕರೆ ನೀಡಿದರು.ಈ ಸಂದರ್ಭದಲ್ಲಿ ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ್, ನವದೆಹಲಿಯ



ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಹೆಚ್.ವಿ. ವೆಂಕಟೇಶ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಕಾರ್ಮಿಕ ಅಧಿಕಾರಿ ಇಬ್ರಾಹಿಂ ಸಾಬ್ ಜಿ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಕರವೇ ತಾಲೂಕು ಅಧ್ಯಕ್ಷರಾಗಿ ರಂಗಣ್ಣ ಗಾಲಿ ಆಯ್ಕೆ




ಯುವ ಮಾರ್ಗ ಸುದ್ದಿ

**ಅರಕೇರಾ,ಅ.10–** ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷರನ್ನಾಗಿ ರಂಗಪ್ಪ ಗಾಲಿ ಅವರನ್ನು ಜಿಲ್ಲಾಧ್ಯಕ್ಷ ಗಂಗಣ್ಣ ಡಿಶ್ ಆಯ್ಕೆ ಮಾಡಿದ್ದಾರೆ.

ಸಂಘಟನೆ ತತ್ವ, ಸಿದ್ಧಾಂತ, ನೀತಿ ಮತ್ತು ನಿಯಮಗಳನ್ನು ಒಪ್ಪಿಕೊಂಡು, ಹಲವಾರು ವರ್ಷಗಳಿಂದ ಸಂಘಟನೆಯಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸಿದ್ದನ್ನು ಪರಿಗಣಿಸಿ ಆಯ್ಕೆ ಮಾಡಿದ್ದಾರೆ. ಕನ್ನಡ ನಾಡು, ನುಡಿ, ಸಂಸ್ಕೃತಿಯ ರಕ್ಷಣೆಯ ಸಲುವಾಗಿ ಸಂಘಟನೆಯನ್ನು ಬಲಪಡಿಸಲು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು ಎಂದು ಆದೇಶಿಸಿದ್ದಾರೆ.

## ಅಕ್ಟೋಬರ್ 13ರಂದು ಮಾಸಿಕ ಕೆಡಿಪಿ ಸಭೆ

**ರಾಯಚೂರು,ಅ.10–** 2025–26ನೇ ಸಾಲಿನ ಜಿಲ್ಲಾ ವಲಯ ಕಾರ್ಯಕ್ರಮಗಳ ವಾರ್ಷಿಕ ಕ್ರಿಯಾ ಯೋಜನೆಗಳ ಪ್ರಗತಿ ಪರಿಶೀಲನೆ ಮತ್ತು ಅನುಮೋದನೆ ನೀಡುವ ಕುರಿತು ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ ಕುಮಾರ ಸಿಂಗ್ ಅವರು ಅಧ್ಯಕ್ಷತೆಯಲ್ಲಿ ಅಕ್ಟೋಬರ್ 13ರ ಬೆಳಿಗ್ಗೆ 12 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಾಸಿಕ ಕೆ.ಡಿ.ಪಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಈ ಸಭೆಗೆ ಸೆಪ್ಟೆಂಬರ್–2025ರ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿಯನ್ನು ಮತ್ತು ಸಂಕ್ಷಿಪ್ತ ಮಾಹಿತಿಯ ವಿವರಗಳನ್ನು ಎ4 ಸೈಜಿನ ಲ್ಯಾಂಡ್ ಸ್ಕೆಪ್ ಪೇಪರ್‌ನಲ್ಲಿ ದ್ವಿಪ್ರತಿಯಲ್ಲಿ ಮತ್ತು ಸಾಫ್ಟ್ ಪ್ರತಿಯನ್ನು ಜಿಲ್ಲಾ ಪಂಚಾಯತ್, ಯೋಜನಾ ಶಾಖೆಯ ಇಮೇಲ್ ವಿಳಾಸ: zpcporcr@gmail.com ಗೆ ತಪ್ಪದೇ ಸಲ್ಲಿಸಬೇಕು. ಸಭೆಗೆ ಇಲಾಖಾ ಮುಖ್ಯಸ್ಥರು ಖುದ್ದಾಗಿ ಇಲಾಖಾ ಮಾಹಿತಿಯೊಂದಿಗೆ ಹಾಜರಾಗುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಟೋಬರ್ 15ರಂದು ಸಾರ್ವಜನಿಕರ ಕುಂದುಕೊರತೆ ಸಭೆ

**ರಾಯಚೂರು,ಅ.10–**ಜಿಲ್ಲಾ ಲೋಕಾಯುಕ್ತ ಪೊಲೀಸ್ ಇಲಾಖೆಯಿಂದ ಅಕ್ಟೋಬರ್ 15ರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಗೆವರೆಗೆ ರಾಯಚೂರಿನ ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳ ಸಭೆಯಲ್ಲಿ ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಲೋಕಾಯುಕ್ತ ಪೋಲೀಸ್ ಅಧೀಕ್ಷಕರಾದ ಸತೀಶ್ ಎಸ್.ಚಿಟಗುಬ್ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೂ ಎಸೆತ ಪ್ರಕರಣ: ಚಂದ್ರಶೇಖರ ಹರನಾಳ ಖಂಡನೆ




**ಜೇವರಗಿ,ಅ.10:** ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರತ್ತ ವಕೀಲರೊಬ್ಬರು ಶೂ ಎಸೆಯಲು ಯತ್ನಿಸಿದ್ದನ್ನು ಖಂಡಿಸಿ ಪಟ್ಟಣದಲ್ಲಿ ದಲಿತ ಸಮನ್ವಯ ಸಮಿತಿ ತಾಲ್ಲೂಕು ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಪಟ್ಟಣದ ಪ್ರವಾಸಿ ಮಂದಿರದಿಂದ ನೂರಾರು ಜನ ದಲಿತ ಮುಖಂಡರು ತಹಶೀಲ ಕಚೇರಿಯ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.ವಕೀಲನೊಬ್ಬ ಸುಪ್ರೀಂಕೋರ್ಟ್‌ಲ್ಲೇ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರತ್ತ ಶೂ ಎಸೆದ ಕೃತ್ಯ ಇಡೀ ನ್ಯಾಯಾಂಗ ವ್ಯವಸ್ಥೆಗೆ ಕಪ್ಪು ಚುಕ್ಕೆ ತಂದಿದೆ. ಶೂ ಎಸೆದು ಸನಾತನ ಧರ್ಮ ಬೆಂಬಲಿಸುವ ಘೋಷಣೆ ಕೂಗಲಾಗಿದೆ. ಈ ಕೃತ್ಯಕ್ಕೆ ಕಾರಣರಾದ ವ್ಯಕ್ತಿ ಮತ್ತು ಆತನಿಗೆ ಕುಮ್ಮಕ್ಕು ನೀಡಿದ ಸಂಘಟನೆಗಳ ಮೇಲೆ ಕಠಿಣ ಕಾನೂನಿನ ಕ್ರಮ ಜರುಗಿಸಬೇಕುಎಂದು ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಚಂದ್ರಶೇಖರ್ ಹರನಾಳ ಆಗ್ರಹಿಸಿದರು.ನಂತರ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.ನಂತರ ದಲಿತ ಮುಖಂಡರಾದ ಭೀಮರಾಯ ನಾಗನೂರ, ನಿಜಲಿಂಗ ದೊಡ್ಡಮನಿ, ಮಲ್ಲಣ್ಣ ಕೊಡಚಿ, ದವಲಪ್ಪ ಮದನ, ರಾಜಶೇಖರ ಶಿಲ್ಪಿ, ಶ್ರೀಹರಿ ಕರಕಿಹಳ್ಳಿ, ಬಸಣ್ಣ ಸರಕಾರ, ರಾಯಪ್ಪ ಬಾರಿಗಿಡ, ಮಹೇಶ ಕೋಕಿಲೆ, ವಿಶ್ವರಾದ ಭಾಗವಹಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H